ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಿವಕುಮಾರ್ ಕೆ., ಶ್ರೀ ಎಸ್.ಎಸ್. ಬೋಸ್‌ರಾಜು, ಡಾ: ಎಂ.ಆರ್. ಸೀತಾರಾಂ, ಶ್ರೀ ತಿಪ್ಪಣ್ಣಪ್ಪ ಕಮಕನೂರ, ಶ್ರೀಮತಿ ಎ.ವಿ. ಗಾಯತ್ರಿ ಶಾಂತೇಗೌಡ, ಶ್ರೀ ಎಂ.ಎಲ್. ಅನಿಲ್ ಕುಮಾರ್, ಶ್ರೀ ರಾಜೇಂದ್ರ ರಾಜಣ್ಣ, ಶ್ರೀ ಬಸನಗೌಡ ಬಾದರ್ಲಿ, ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.), ಶ್ರೀ ಶರಣಗೌಡ ಬಯ್ಯಾಪುರ, ಶ್ರೀ ಭೀಮರಾವ್ ಬಸವರಾಜ್ ಪಾಟೀಲ್, ಶ್ರೀ ಮಂಜುನಾಥ್ ಭಂಡಾರಿ, ಶ್ರೀ ಎಫ್.ಹೆಚ್. ಜಕ್ಕಪ್ಪನವರ್ ಹಾಗೂ ಶ್ರೀಮತಿ ಬಲ್ಕೀಸ್ ಬಾನು ಇವರು ನಿಯಮ 330ರಡಿಯಲ್ಲಿ ಈ ಕೆಳಕಂಡಂತೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

ಅಯೋಧ್ಯೆಯಲ್ಲಿ ಶ್ರೀ ರಾಮಮಂದಿರ ನಿರ್ಮಾಣಕ್ಕಾಗಿ ಕರ್ನಾಟಕ ರಾಜ್ಯದ ಲಕ್ಷಾಂತರ ಭಕ್ತಾದಿಗಳು ಅತ್ಯಂತ ಶ್ರದ್ಧೆ, ಭಕ್ತಿ ಮತ್ತು ವಿಶ್ವಾಸದಿಂದ ನೂರಾರು ಕೋಟಿ ರೂಪಾಯಿಗಳನ್ನು ದೇಣಿಗೆ ಹಾಗೂ ಕಾಣಿಕೆಯಾಗಿ ನೀಡಿದ್ದಾರೆ. ಆದರೆ, ಭಕ್ತರು ನೀಡಿದ ಈ ಪವಿತ್ರ ಕಾಣಿಕೆ ಹಣದಲ್ಲಿ ಅಕ್ರಮ, ಭ್ರಷ್ಟಾಚಾರ ಹಾಗೂ ಹಣ ದುರುಪಯೋಗ ನಡೆದಿರುವ ಗಂಭೀರ ಆರೋಪಗಳು ಮತ್ತು ವರದಿಗಳು ಬೆಳಕಿಗೆ ಬಂದಿರುವುದು ಸಮಸ್ತ ಭಕ್ತ ಸಮೂಹಕ್ಕೆ ತೀವ್ರ ಆಘಾತವನ್ನುಂಟು ಮಾಡಿದೆ. ಸಾರ್ವಜನಿಕರ ಧಾರ್ಮಿಕ ಭಾವನೆಗಳು ಹಾಗೂ ಭಕ್ತಿಯನ್ನು ದುರ್ಬಳಕೆ ಮಾಡಿಕೊಂಡು ನಡೆಸಿರುವ ಈ ಅಕ್ರಮವು ಅತ್ಯಂತ ಖಂಡನೀಯ ಹಾಗೂ ಗಂಭೀರ ವಿಷಯವಾಗಿದೆ.

ಜನಸಾಮಾನ್ಯರ ಹಾಗೂ ಭಕ್ತಾದಿಗಳ ಹಿತದೃಷ್ಟಿಯಿಂದ, ಸಂಗ್ರಹವಾದ ಕಾಣಿಕೆ ಹಣದ ದುರುಪಯೋಗದ ಕುರಿತು ನಿಷ್ಪಕ್ಷಪಾತ ತನಿಖೆಯನ್ನು ನಡೆಸಿ ಈ ಹಗರಣದಲ್ಲಿ ಭಾಗಿಯಾಗಿರುವ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲು ಕೇಂದ್ರಕ್ಕೆ ಪತ್ರ ಬರೆಯಬೇಕೆಂದು ರಾಜ್ಯ ಸರ್ಕಾರವನ್ನು ಒತ್ತಾಯಿಸುವ ಕುರಿತು ನಿಯಮ 330ರ ಅಡಿಯಲ್ಲಿ ಗಮನ ಸೆಳೆದಿರುತ್ತಾರೆ.

ಉತ್ತರ:-

ಅಯೋಧ್ಯೆಯಲ್ಲಿ ಶ್ರೀ ರಾಮಮಂದಿರ ನಿರ್ಮಾಣಕ್ಕಾಗಿ ಕರ್ನಾಟಕ ರಾಜ್ಯದ ಲಕ್ಷಾಂತರ ಭಕ್ತಾದಿಗಳು ಅತ್ಯಂತ ಶ್ರದ್ಧೆ, ಭಕ್ತಿ ಮತ್ತು ವಿಶ್ವಾಸದಿಂದ ನೂರಾರು ಕೋಟಿ ರೂಪಾಯಿಗಳನ್ನು ದೇಣಿಗೆ ಹಾಗೂ ಕಾಣಿಕೆಯಾಗಿ ನೀಡಿದ ಹಣದಲ್ಲಿ ಅಕ್ರಮ, ಭ್ರಷ್ಟಾಚಾರ ಹಾಗೂ ಹಣ ದುರುಪಯೋಗ ನಡೆದಿರುವ ಕುರಿತು ಗಂಭೀರ ಆರೋಪಗಳು ಮತ್ತು ವರದಿಗಳು ಬೆಳಕಿಗೆ ಬಂದ ಹಿನ್ನಲೆಯಲ್ಲಿ, ಜನಸಾಮಾನ್ಯರ ಹಾಗೂ ಭಕ್ತಾದಿಗಳ ಹಿತದೃಷ್ಟಿಯಿಂದ ಸಂಗ್ರಹವಾದ ಕಾಣಿಕೆ ಹಣದ ದುರುಪಯೋಗದ ಕುರಿತು ನಿಷ್ಪಕ್ಷಪಾತ ತನಿಖೆಯನ್ನು ನಡೆಸಿ ಈ ಹಗರಣದಲ್ಲಿ ಭಾಗಿಯಾಗಿರುವ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲು ಕೇಂದ್ರ ಸರ್ಕಾರವನ್ನು ಒತ್ತಾಯಿಸಲು ಪತ್ರ ಬರೆಯುವ ಕುರಿತು ಪರಿಶೀಲಿಸಲಾಗುವುದು.

ಸಂಖ್ಯೆ:ಕಂಇ 180 ಮುಸಪ್ರ 2026

(ಕೆ.ಎಸ್.ಬಸವಂತಪ್ಪ)
ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು
ಮತ್ತು ಒಳನಾಡು ಜಲಸಾರಿಗೆ ಸಚಿವರು